# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 24 (146) |
| ಸದಸ್ಯರ ಹೆಸರು | : | ಶ್ರೀ ಕೆ.ಪ್ರತಾಪ್ ಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 10.12.2024 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ಪ್ರಾಧಿಕಾರದ ಮಹಾಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯಿಂದಾಗಿ 2017ರ ಪೂರ್ವದ ಭೂಪರಿವರ್ತಿತ ಹಾಗೂ ನಮೂನೆ-3 ರಂತೆ ಗುರುತಿಸಿರುವ ನಿವೇಶನಗಳನ್ನು ಹೊಂದಿರುವ ಖಾತೆದಾರರಿಗೆ ಹೊಸ ಮನೆ ನಿರ್ಮಾಣಕ್ಕಾಗಿ ಕಟ್ಟಡ ಪರವಾನಗಿ ದೊರೆಯದೆ ಮತ್ತು ಈಗಾಗಲೇ ವಾಸವಿರುವ ಮನೆಗಳ ನವೀಕರಣ ಅಥವಾ ವಿಸ್ತರಣೆಗೆ ಕೂಡ ಪರವಾನಗಿ ದೊರೆಯದೆ ಸಾರ್ವಜನಿಕರಿಗೆ ದೀರ್ಘಕಾಲದಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಗೊಂಡ ನಂತರ ವಿನ್ಯಾಸ ನಕ್ಷೆ ಅನುಮೋದನೆಗೊಂಡು ಸ್ಥಳೀಯ ಸಂಸ್ಥೆಯಲ್ಲಿ ಖಾತೆ (ನಮೂನೆ-3) ತೆರೆದಿರುವ ನಿವೇಶನಗಳಲ್ಲಿ ಕಟ್ಟಡ ಪರವಾನಿಗೆಗೆ ತಾಂತ್ರಿಕ ಅಭಿಪ್ರಾಯ ನೀಡಲು 2017 ಕ್ಕಿಂತ ಪೂರ್ವದಲ್ಲಿನ ಹಾಗೂ 2017 ನಂತರದ ಪ್ರಕರಣಗಳಿಗೆ ಈವರೆಗೆ ಕಟ್ಟಡ ಪರವಾನಿಗೆ ನೀಡಲಾಗುತ್ತಿದೆ.<br><br>ಇನ್ನುಳಿದ ಅಂದರೆ ಭೂ ಪರಿವರ್ತನೆಯಾಗದ ಹಾಗೂ ವಿನ್ಯಾಸ ನಕ್ಷೆ ಅನುಮೋದನೆಯಾಗದ ನಿವೇಶನಗಳಿಗೆ ಪಟ್ಟಣ ಪಂಚಾಯಿತಿಯಲ್ಲಿ ಖಾತೆ ತೆರೆದಿದ್ದರೂ ಸಹಾ ಅಂತಹ ಅನಧಿಕೃತ ನಿವೇಶನಗಳಿಗೆ ಕಟ್ಟಡ ಪರವಾನಿಗೆ ನೀಡಲು ಅವಕಾಶವಿರುವುದಿಲ್ಲ.<br><br>ಆದಾಗ್ಯೂ, ಸರ್ಕಾರದ ಪತ್ರ ಸಂಖ್ಯೆ: ನಅಇ 319 ಮೈಅಪ್ರಾ 2022(ಇ), ದಿನಾಂಕ: 22.12.2022 ರ ಪತ್ರದಲ್ಲಿ ಬೆಳ್ತಂಗಡಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಮಹಾಯೋಜನೆ ಅನುಮೋದನೆಯಾಗುವವರೆಗೆ ಸಾರ್ವಜನಿಕರಿಗೆ ತಾಂತ್ರಿಕ ಅಭಿಪ್ರಾಯ ಮತ್ತು ಕಟ್ಟಡ ಪರವಾನಗಿಗಳನ್ನು ಸ್ಥಳೀಯ ಸಂಸ್ಥೆಯಿಂದ ನಿಯಮಾನುಸಾರ ನೀಡಲು ಅನುಮತಿ ನೀಡಲಾಗಿದೆ (ಪ್ರತಿ **ಅನುಬಂಧ-1** ರಲ್ಲಿ ಒದಗಿಸಿದೆ).<br><br>ಮುಂದುವರೆದು ಬೆಳ್ತಂಗಡಿ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ ತಯಾರಿಕಾ ಕಾರ್ಯದ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ. |
| (ಆ) | ಬಂದಿದ್ದಲ್ಲಿ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಸಂಬಂಧಿಸಿದಂತೆ ಇದನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ 2017ರ ಪೂರ್ವದಲ್ಲಿ ಕೃಷಿಯೇತರ ಉದ್ದೇಶಕ್ಕಾಗಿ ಭೂಪರಿವರ್ತಿತ ಆಸ್ತಿಗಳನ್ನು ಹೊಂದಿರುವವರಿಗೆ ಮಹಾ ಯೋಜನೆಯ ನಿಯಮಗಳನ್ನು ಅನ್ವಯಿಸದೆ, ಈ ಹಿಂದಿನಂತೆ ನಿವೇಶನಗಳ ವಿನ್ಯಾಸ ನಕ್ಷೆಯನ್ನು ಅನುಮೋದಿಸಿ, ಅಧಿಕೃತ ನಿವೇಶನಗಳೆಂದು ಪರಿಗಣಿಸಿ, ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ಕಟ್ಟಡ ಪರವಾನಗಿಯನ್ನು ನೀಡಲು ಸರ್ಕಾರ ಇದುವರೆಗೂ ಯಾವುದೇ ಕ್ರಮ ವಹಿಸದೇ ಇರಲು ಕಾರಣಗಳೇನು; | |
| (ಇ) | ಅಂತಹ ಖಾತೆದಾರರಿಗೆ ಯಾವ ಕಾಲಮಿತಿಯೊಳಗೆ ಸದರಿ ಸಮಸ್ಯೆಯನ್ನು ಪರಿಹರಿಸಿ, ದೀರ್ಘಕಾಲದಿಂದ ಸಮಸ್ಯೆ ಪರಿಹಾರಕ್ಕಾಗಿ ಕಾಯುತ್ತಿರುವ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು? | ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿ ಮಹಾಯೋಜನೆ ಅನುಮೋದನೆಯಾಗಿರುವ ಪ್ರದೇಶಗಳಲ್ಲಿ ದಿನಾಂಕ:19.10.2013 ರ ಮುಂಚಿತವಾಗಿ ಬಂದಿರುವ ಎಲ್ಲಾ ತರಹದ ಅನಧಿಕೃತ ಅಭಿವೃದ್ಧಿಗಳನ್ನು ಸಕ್ರಮಗೊಳಿಸಲು ಸರ್ಕಾರವು ಅಧಿಸೂಚನೆ ಸಂಖ್ಯೆ:ನಅಇ 556 ಮೈಅಪ್ರಾ 2013(1) ದಿನಾಂಕ: 28.05.2014 ರಲ್ಲಿ Karnataka Town and Country Planning (Regularization of unauthorized Development of Constructions) Rules, 2014ನ್ನು ಜಾರಿಗೆ |

| | | |
|---|---|---|
| | | ತಂದಿರುತ್ತದೆ.<br>ಸದರಿ ನಿಯಮಕ್ಕೆ ಘನ ಸರ್ವೋಚ್ಚ ನ್ಯಾಯಾಲಯವು ಪ್ರಕರಣ ಸಂಖ್ಯೆ:SLP© No. 956-957/2017 ರಲ್ಲಿನ ಮಧ್ಯಂತರ ಆದೇಶ ದಿನಾಂಕ:13.01.2017 ರಲ್ಲಿ ತಡೆಯಾಜ್ಞೆ ನೀಡಿರುತ್ತದೆ. ಪ್ರಕರಣವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ. |

ಕಡತ ಸಂಖ್ಯೆ: ನಅಇ 457 ಮೈಅಪ್ರಾ 2024

( ಬಿ.ಎಸ್.ಸುರೇಶ)

ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು.

ಅನುಬಂಧ-1

**ಕರ್ನಾಟಕ ಸರ್ಕಾರ**

ಸಂಖ್ಯೆ:ನಅಇ 319 ಮೈಅಪ್ರಾ 2022(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 22-12-2022

**ಇವರಿಂದ,**

ಸರ್ಕಾರದ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ,
ಬೆಂಗಳೂರು-01.

**ಇವರಿಗೆ,**

1. ಸದಸ್ಯ ಕಾರ್ಯದರ್ಶಿ,
   ಯೋಜನಾ ಪ್ರಾಧಿಕಾರ,
   ಬೆಳ್ತಂಗಡಿ.
2. ಮುಖ್ಯಾಧಿಕಾರಿ,
   ಪುರಸಭೆ,
   ಬೆಳ್ತಂಗಡಿ.

**ಮಾನ್ಯರೇ,**

**ವಿಷಯ:** ಬೆಳ್ತಂಗಡಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಿಸಲು ಅನುಮತಿ ನೀಡುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೆಳ್ತಂಗಡಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಮಹಾಯೋಜನೆ ಅನುಮೋದನೆಯಾಗುವವರೆಗೆ ಸಾರ್ವಜನಿಕರಿಗೆ ತಾಂತ್ರಿಕ ಅಭಿಪ್ರಾಯ ಮತ್ತು ಕಟ್ಟಡ ಪರವಾನಗಿಗಳನ್ನು ಸ್ಥಳೀಯ ಪುರಸಭೆಯಿಂದಲೇ ನಿಯಮಾನುಸಾರ ನೀಡಲು ಅನುಮತಿ ನೀಡಿದೆ ಎಂದು ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ಮುಂದುವರೆದು, ಮಹಾಯೋಜನೆಯನ್ನು ಶೀಘ್ರವಾಗಿ ಸರ್ಕಾರದ ಅನುಮೋದನೆಗೆ ಸಲ್ಲಿಸುವಂತೆ ಸಹ ಕೋರಿದೆ.

ತಮ್ಮ ನಂಬುಗೆಯ,

22/12

(ಸತೀಶ್ ಕಬಾಡಿ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ & ನಯೋಸೇ)
ನಗರಾಭಿವೃದ್ಧಿ ಇಲಾಖೆ.

22-12-22